ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕೋರ್ಟ್ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 24/06/2020

## ಶಿಲುಬೆ, ಮೇರಿ ವಿಗ್ರಹ ತೆರವು

» ಹೈಕೋರ್ಟ್ ಆದೇಶದಂತೆ ತಾಲೂಕು ಆಡಳಿತ ಕ್ರಮ

ರಾಮನಗರ: ಗೊಲ್ಲರ ಚೆನ್ನಯ್ಯನ ದೊಡ್ಡಿ ಗ್ರಾಮದಲ್ಲಿರುವ ಹಾರ್ನ ಬೆಟ್ಟದಲ್ಲಿ ಅಕ್ರಮವಾಗಿ ನಿರ್ಮಿಸಲಾಗಿದ್ದ 15 ಅಡಿಗೂ ಹೆಚ್ಚು ಎತ್ತರದ ಶಿಲುಬೆ ಹಾಗೂ ಮೇರಿ ವಿಗ್ರಹವನ್ನು ಹೈಕೋರ್ಟ್ ಆದೇಶದಂತೆ ತಾಲೂಕು ಆಡಳಿತ ಮಂಗಳವಾರ ತೆರವುಗೊಳಿಸಿದೆ. ರಾಮನಗರದ ಬಿಳಗುಂಬ ಗ್ರಾಮದ ಸರ್ವೇ ನಂ. 266ರಲ್ಲಿ 139 ಎಕರೆ ಗೋಮಾಳ ದಲ್ಲಿ ಸೆಬಾಸ್ಟಿಯನ್ ರಾಣಿ ಎಂಬಾಕೆ ಅಕ್ರಮವಾಗಿ ಶಿಲುಬೆ ಹಾಗೂ ಯೇಸು ಪ್ರತಿಮೆ ಸ್ಥಾಪಿಸಿದ್ದಾರೆ. ಈ ಸಂಬಂಧ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದ್ದರೂ ಪ್ರಯೋಜನವಾಗಿಲ್ಲ ಎಂದು ಹಿಂದು ಜಾಗರಣಾ ವೇದಿಕೆ ಉಚ್ಚ ನ್ಯಾಯಾಲಯದಲ್ಲಿ ರಿಟ್ ಸಲ್ಲಿಸಿತ್ತು.

ಉದಯ 24-06-2020

## ನಿಯಮ ಉಲ್ಲಂಘಿಸಿದವರ ವಿರುದ್ಧ ಕ್ರಮ

» ಪರಮೇಶ್ವರ್ ನಾಯಕ್ ಪುತ್ರ ವಿವಾಹ

ಬೆಂಗಳೂರು: ಶಾಸಕ ಪಿ.ಟಿ. ಪರಮೇಶ್ವರ್ ನಾಯಕ್ ಮಗನ ಮದುವೆ ಸಮಾರಂಭದಲ್ಲಿ ಭಾಗವಹಿಸಿದವರು ಮಾಸ್ಕ್ ಧರಿಸದ ಹಾಗೂ ವ್ಯಕ್ತಿಗತ ಅಂತರ ಕಾಯ್ದುಕೊಳ್ಳದ ವಿಚಾರ ಕುರಿತು ಪರಿಶೀಲನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ಹೈಕೋರ್ಟ್ ಸೂಚಿಸಿದೆ. ಗೀತಾ ಮಿಶ್ರಾ ಎಂಬುವರು ಸಲ್ಲಿಸಿದ್ದ ಅರ್ಜಿಯನ್ನು ಮಂಗಳವಾರ ವಿಚಾರಣೆ ನಡೆಸಿದ ಸಿಜೆ ಎ.ಎಸ್.ಓಕ್ ನೇತೃತ್ವದ ವಿಭಾಗೀಯ ಪೀಠ ಈ ಸೂಚನೆ ನೀಡಿತು.